**ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ಪ್ರ. ದ. ನ್ಯಾ. ದಂಡಾಧಿಕಾರಿಗಳ ನ್ಯಾಯಾಲಯ, ಗೋಕಾಕ**

**ಸಿ.ಸಿ. ನಂ.62/2023**

| | |
|---|---|
| **ಪಿರ್ಯಾದುದಾರರುಃ** | ನಿರ್ವಾಣಿ ಮಲ್ಲಪ್ಪ ಕಟ್ಟಿ,<br>46 ವರ್ಷ, ವಾಸಃ ಅಕ್ಕಿಸಾಗರ, ತಾಃ ಸವದತ್ತಿ. |

**- ವಿರುದ್ಧ -**

| | |
|---|---|
| **ಆರೋಪಿಃ** | ಶ್ರೀಮತಿ. ಶಂಕ್ರವ್ವ ಕೋಂ. ಶಿವರಾಯಪ್ಪ ಹುಜರಟ್ಟಿ,<br>38 ವರ್ಷ, ವಾಸಃ ಗೋರಬಾಳ, ತಾಃ ಸವದತ್ತಿ. |

**ಆಪಾದನೆ**

**ಶ್ರೀ ರಾಜೀವ ಗೋಳಸಾರ, ಬಿ.ಎ., ಎಲ್.ಎಲ್.ಎಂ., ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ. ದಂಡಾಧಿಕಾರಿ, ಗೋಕಾಕ,** ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆಪಾದನೆ ಮಾಡುತ್ತಿದ್ದೇನೆಃ

ಪಿರ್ಯಾದಿದಾರರು ಮತ್ತು ಆರೋಪಿಯಾದ ನೀವು ಒಳ್ಳೆಯ ಪರಿಚಯಸ್ಥರಿರುತ್ತಿರಿ. ಹೀಗಿರುವಾಗ ಆರೋಪಿಯಾದ ನೀವು ಸಾಲ ತೀರಿಸುವ ಸಲುವಾಗಿ ಅಂತಾ 2021 ರ ಆಗಸ್ಟ ತಿಂಗಳಿನಲ್ಲಿ ಪಿರ್ಯಾದುದಾರರ ಕಡೆಯಿಂದ ರೂ.6,00,000/- ಗಳನ್ನು ಪಡೆದುಕೊಂಡಿದ್ದು, ಸದರಿ ಸಾಲದ ಹಣವನ್ನು 3-4 ತಿಂಗಳ ಒಳಗಾಗಿ ಮರಳಿ ಕೊಡುತ್ತೇನೆಂದು ತಿಳಿಸಿರುತ್ತಿರಿ.

ನಂತರ ನವೆಂಬರ ತಿಂಗಳಿನಲ್ಲಿ ಆರೋಪಿಯಾದ ನೀವು ದಿಃ 29.11.2022 ಎಂದು ನಮೂದು ಮಾಡಿ ನೀವು ನಿಮ್ಮ ಖಾತೆಯಿರುವ ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್, ಶಾಖೆಃ ಹೂಲಿಕಟ್ಟಿ ಇಲ್ಲಿಗೆ ಸೇರಿದ ಚೆಕ್ ನಂ.003307 ನೇದ್ದನ್ನು ರೂ.6,00,000/- ಎಂದು ನಮೂದು ಮಾಡಿ ಪಿರ್ಯಾದುದಾರರಿಗೆ ನೀಡಿರುತ್ತಿರಿ.

ಆರೋಪಿಯಾದ ನೀವು ನೀಡಿದ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಖಾತೆಯಿರುವ ಕರ್ನಾಟಕ ಬ್ಯಾಂಕ್ ಲಿ., ಗೋಕಾಕ ಶಾಖೆ ಇಲ್ಲಿಗೆ ನಗದೀಕರಣಕ್ಕೆ ಹಾಜರುಪಡಿಸಿದಾಗ, ಆರೋಪಿಯಾದ ನಿಮ್ಮ ಖಾತೆಯಲ್ಲಿ "ಸಾಕಷ್ಟು ಹಣ ಇರುವುದಿಲ್ಲ" (FUNDS INSUFFICIENT) ಎಂಬ ಹಿಂಬರಹ ಹಾಗೂ ಮೆಮೋದೊಂದಿಗೆ ದಿನಾಂಕ 30.11.2022 ರಂದು ಸದರಿ ಚೆಕ್ ಅಮಾನ್ಯಗೊಂಡಿರುತ್ತದೆ.

ನಂತರ ಪಿರ್ಯಾದುದಾರರು ಆರೋಪಿಯಾದ ನೀವು ನೀಡಿದ ಚೆಕ್ಕು ಅಮಾನ್ಯಗೊಂಡ ಬಗ್ಗೆ ತಮ್ಮ ವಕೀಲರ ಮುಖಾಂತರ ದಿನಾಂಕ 09.12.2022 ರಂದು ತಿಳುವಳಿಕೆ ಪತ್ರವನ್ನು ಆರೋಪಿಯಾದ ನಿಮಗೆ ನೋಂದಾಯಿತ ಅಂಚೆ ಮೂಲಕ ಕಳುಹಿಸಿದ್ದುರೂ ಸಹಿತ ಆರೋಪಿಯಾದ ನೀವು ನಿಗದಿತ ಸಮಯದಲ್ಲಿ

ಚೆಕ್ಕಿನ ಹಣವನ್ನು ಮರುಸಂದಾಯ ಮಾಡದ ಕಾರಣ ನೀವು ವರ್ಗಾವಣೀಯ ಲಿಖಿತಗಳ ಅಧಿನಿಯಮದ ಕಲಂ.138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಆಪಾದಿಸಲಾಗಿರುತ್ತದೆ.

**ಆರೋಪಿಯ ಹೇಳಿಕೆ**

ಪ್ರಶ್ನೆ ನಂ.1. ಈಗ ಓದಿ ಹೇಳಿದ ಆಪಾದನೆಯನ್ನು ಕೇಳಿಸಿಕೊಂಡಿರಾ ? ತಿಳಿಯಿತೇ ?

ಉತ್ತರಃ

ಪ್ರಶ್ನೆ ನಂ.2. ಸದರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆಯಾಗಬೇಕಾ ?

ಉತ್ತರಃ

ಮೇಲಿನ ಆಪಾದನೆಯನ್ನು ಆರೋಪಿಗೆ ಕನ್ನಡ ಭಾಷೆಯಲ್ಲಿ ಓದಿ ಹೇಳಿ, ಆರೋಪಿಯು ಕೊಟ್ಟ ಉತ್ತರವು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನೊಳಗೊಂಡಿದೆ ಎಂದು ಈ ದಿನ ಅಂದರೆ ದಿನಾಂಕ 30.05.2023 ರಂದು ತೆರೆದ ನ್ಯಾಯಾಲಯದಲ್ಲಿ ದೃಡೀಕರಿಸುತ್ತೇನೆ.

**(ರಾಜೀವ ಗೋಳಸಾರ)**
**ಪ್ರಧಾನ ಪ್ರ.ದ.ನ್ಯಾ. ದಂ, ಗೋಕಾಕ.**